# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಬಿ.ಟಿ.ಎಂ.ಲೇಔಟ್ ಉಪ ವಿಭಾಗ,
16ನೇ ಮುಖ್ಯರಸ್ತೆ, ಬಿ.ಟಿ.ಎಂ.1ನೇ ಹಂತ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು-29, ದಿನಾಂಕ:09.05.2022

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

ವಿಷಯ:- ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ

ಉಲ್ಲೇಖ:1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲೂಪಿ 24739/2012,
ದಿನಾಂಕ: 10.11.2017

2) ಕೇಂದ್ರ ಕಛೇರಿ ಆದೇಶ ಸಂಖ್ಯೆ: ಬಿ12(5)/ಪಿಆರ್/35/2020-21,
ದಿನಾಂಕ: 21.09.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:176 ಬಿ.ಟಿ.ಎಂ ಲೇಔಟ್, 9ನೇ ಮುಖ್ಯರಸ್ತೆಯ ಬಿ.ಟಿ.ಎಂ 2ನೇ ಹಂತದ ಕೆಂಪೇಗೌಡ ಆಟದ ಮೈದಾನದಲ್ಲಿರುವ ಬಿ.ಬಿ.ಎಂ.ಪಿ ಕಛೇರಿಯಲ್ಲಿ ಸಭೆಯನ್ನು ದಿನಾಂಕ: 11.05.2022ರ ಬೆಳಿಗ್ಗೆ 11:00 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಸದಸ್ಯರು ಹಾಗೂ ವಾರ್ಡ್ ಸಂಖ್ಯೆ 176 ಬಿ.ಟಿ.ಎಂ ಲೇಔಟ್‌ಗೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

:ಸಭಾ ಅಜೆಂಡಾ:

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ಕೋವಿಡ್-19 ರ ಬಗ್ಗೆ ಚರ್ಚಿಸುವುದು |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳ ಬಗ್ಗೆ ಚರ್ಚೆ |

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:176, ಬಿ.ಟಿ.ಎಂ ಲೇಔಟ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ರವರಿಗೆ :-**

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-16 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಎಸ್-6 ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
9) ಆರಕ್ಷಕ ಉಪನಿರೀಕ್ಷಕರು ಮೈಕೋ ಲೇಔಟ್ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
10) ಆರಕ್ಷಕ ಉಪನಿರೀಕ್ಷಕರು ಸಂಚಾರಿ ಪೊಲೀಸ್ ಠಾಣೆ ಮೈಕೋ ಲೇಔಟ್ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
11) ಮಾನ್ಯ ಮುಖ್ಯ ಅಭಿಯಂತರರು ಬೆಂಗಳೂರು ಮೆಟ್ರೋ ರೈಲು ನಿಗಮ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with CamScanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-176 ಬಿ.ಟಿ.ಎಂ ಬಡಾವಣೆ ಕಛೇರಿಯಲ್ಲಿ ದಿನಾಂಕ: 11.05.2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿಆರ್/35/2020-21/21-09-2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ವೆಂಕಟೇಶ್.ಎಸ್, ಐ.ಆರ್.ಎಸ್, ಜಂಟಿ ಆಯುಕ್ತರು, ಹಣಕಾಸು, ಬಿ.ಬಿ.ಎಂ.ಪಿ.ರವನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀ.ವೆಂಕಟೇಶ್.ಎಸ್, ಜಂಟಿ ಆಯುಕ್ತರು, ಹಣಕಾಸು ಬಿ.ಬಿ.ಎಂ.ಪಿ. | 9480685634 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ-176 ವಾರ್ಡ್ | 9844407499 |
| 3 | ಶ್ರೀ.ಮಲ್ಲಿಕಾರ್ಜುನ್ ಹಿರಿಯ ಆರೋಗ್ಯ ಪರಿವೀಕ್ಷಕರು | 9740660072 |
| 4 | ಶ್ರೀ. ಪ್ರಹ್ಲಾದ್,ಕಿರಿಯ ಆರೋಗ್ಯಾ ಪರಿವೀಕ್ಷಕರು | 9972320005 |
| 5 | ಶ್ರಿ ಮುನಿರಾಜು ಸ್ಯಾನಟರಿ ದಫೇದಾರ | 9844884555 |
| 6 | ಶ್ರೀ.ಸತ್ಯನಾರಯಣ ಎಂ ಗ್ಯಾಂಗ್‌ಮೆನ್ | 9686404846 |
| 7 | ಶ್ರೀ.ಶರಣಪ್ಪ ಮಾರ್ಷಲ್ | |

* * * * * *

ದಿನಾಂಕ-11-05-2022 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

**ರಸ್ತೆ ಅಗೆತಗಳು ಮತ್ತು ರಸ್ತೆಗುಂಡಿಗಳ ನಿರ್ವಹಣೆ ಮಾಡುವ ಬಗ್ಗೆ:-**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಓ.ಎಫ್.ಸಿ ಕೇಬಲ್ ಅಳವಡಿಸಲು ರಸ್ತೆಯನ್ನು ಅಗೆದಿದ್ದು, ಈಗಾಗಲೇ ಡಾಂಬರೀಕರಣವನ್ನು ಮಾಡಿದ್ದು, ಸುಮಾರು



Scanned with CamScanner

ದಿನಗಳಿಂದ ಸುರಿಯುತ್ತಿರುವ ಅಕಾಲಿಕ ಮಳೆಯಿಂದ ಸದರಿ ಗುಂಡಿಗಳು ಕುಸಿದಿದ್ದು, ಮತ್ತೊಮ್ಮೆ ಸರಿಯಾಗಿ ರಸ್ತೆಯನ್ನು ಯಥಾಸ್ಥಿತಿಗೆ ತರುವಂತೆ ಕೋರಿದರು.

ಮುಂದುವರೆದು, 16ನೇ ಮುಖ್ಯರಸ್ತೆಯಲ್ಲಿ ಕೆಲವಡೆ ರಸ್ತೆಗುಂಡಿಗಳಿದ್ದು, ಕೂಡಲೇ ಮುಚ್ಚುವಂತೆ ಕೋರಿದರು.

ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ

**ಕೋವಿಡ್-19 ಸೋಂಕು ಹರಡದಂತೆ ನಿರ್ವಹಣೆ ಮಾಡುವ ಬಗ್ಗೆ:-**

ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ಮೂರನೇ ಅಲೆ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆವರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳು ಜಾಗೃತಿ ಮೂಡಿಸಬೇಕು ಹಾಗೂ ಮಾಸ್ಕ ಧರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

**ಘನತ್ಯಾಜ್ಯ ನಿರ್ವಹಣೆ ಮಾಡುವ ಬಗ್ಗೆ:-**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳು ಮರದ ಕೊಂಬೆ ರಂಬೆಗಳು ಬಿದ್ದಿದ್ದು, ಸುಮಾರು ದಿನಗಳಿಂದ ಸರಿಯಾಗಿ ಘನತ್ಯಾಜ್ಯ ನಿರ್ವಹಣೆಯಾಗುತ್ತಿಲ್ಲವೆಂದು ಹಾಗೂ ಮನೆ ಮನೆಗಳಿಂದ ಕಸ ಸಂಗ್ರಹಿಸಲು ಸರಿಯಾಗಿ ಆಟೋ ಟಿಪ್ಪರ್‌ಗಳು ಬರುತ್ತಿಲ್ಲವೆಂದು ಮತ್ತು ಖಾಲಿ ನಿವೇಶನಗಳಲ್ಲಿ ಕಸದ ರಾಶಿಗಳು ಹಾಗೆಯೇ ಇದೆ ಎಂದು ತಿಳಿಸಿದರು ಹಾಗೂ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಅಭಿಯಂತರರು ಈ ತಹಲ್‌ವರಗೂ ಸಹ ವಾರ್ಡ್ ಸಮಿತಿ ಸಭೆಗೆ ಹಾಜರಾಗಿಲ್ಲವೆಂದು ವಿಷಾಧ ವ್ಯಕ್ತಪಡಿಸಿದರು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ 176 ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾನಿ ಬಿ.ಟಿ.ಎಂ ವಲಯ

**ಕೊನೆದಾಗಿ ಸಭೆಯ ಅಧ್ಯಕ್ಷರು ಮಾತನಾಡಿ, ಹಾಲಿ ಮಳೆಗಾಲ ಮುಂಗಾರು ಪ್ರಾರಂಭವಾಗಿರುವುದರಿಂದ ಮುಂಜಾಗ್ರತ ಕ್ರಮಗಳು ಕೈಗೊಳ್ಳಲು ಸೂಚಿಸುತ್ತಾ, ಬಿ.ಟಿ.ಎಂ ಲೇಔಟ್ ಉಪವಿಭಾಗದಲ್ಲಿ ತಾತ್ಕಾಲಿಕ ನಿಯಂತ್ರಣ ಕೊಠಡಿ ವ್ಯವಸ್ಥೆ ಸ್ಥಾಪಿಸಿರುವ ಬಗ್ಗೆ ವಿವರವನ್ನು ಮುಂದಿನ ಸಭೆಗೆ ಸಲ್ಲಿಸಲು ವಾರ್ಡ್ ಅಭಿಯಂತರರಿಗೆ ಸೂಚಿಸುತ್ತಾ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

11/5/2022

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:176, ಬಿ.ಟಿ.ಎಂ ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ



Scanned with CamScanner